15

**ಮಾನ್ಯ ವಿಧಾನ ಪರಿಷತ್ತು ಸದಸ್ಯರಾದ ಶ್ರೀ ಎಂ.ನಾಗರಾಜು ಇವರು ನಿಯಮ-330ರ ಅಡಿಯಲ್ಲಿ ಪ್ರಸ್ತಾಪಿಸಿರುವ ಸೂಚನೆ ಸಂಖ್ಯೆ:15ಕ್ಕೆ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರ ಉತ್ತರ.**

**ಪ್ರಶ್ನೆ:**

ಕರ್ನಾಟಕ ರಾಜ್ಯ ರಾಜಧಾನಿಯ ಹೃದಯ ಭಾಗದಲ್ಲಿ ಸುಮಾರು 60 ವರ್ಷಗಳ ಹಿಂದೆ ಸ್ಥಾಪಿಸಿದ ಕೆಂಪೇಗೌಡ ಬಸ್ ನಿಲ್ದಾಣವನ್ನು ಮರುಅಭಿವೃದ್ಧಿಪಡಿಸಲು ಮುಂದಾದ ಸರ್ಕಾರದ ಕ್ರಮ ಸ್ವಾಗತಾರ್ಹ. ಈ ಬಸ್ ನಿಲ್ದಾಣವನ್ನು ನೆಲಸಮಗೊಳಿಸಿ ಹೊಸದಾಗಿ 32 ಎಕರೆ ಭೂಮಿಯಲ್ಲಿ ಹೈ-ಟೆಕ್ ಬಸ್ ನಿಲ್ದಾಣ, ಬಹುಮಹಡಿ ವ್ಯಾಪಾರ ಕಟ್ಟಡಗಳು, ರೀಟೇಲ್ ಶಾಪಿಂಗ್ ಹಬ್‌ಗಳನ್ನು ನಿರ್ಮಿಸಲು ಸರ್ಕಾರ ಯೋಜಿಸಿದ್ದು, ಈಗಾಗಲೇ ಈ 32 ಎಕರೆ ಭೂಮಿಯಲ್ಲಿ ಬಿ.ಎಂ.ಟಿ.ಸಿ., ಕೆ.ಎಸ್.ಆರ್.ಟಿ.ಸಿ. ಮತ್ತು ಮೆಟ್ರೋ ಯೋಜನೆ ಕಾರ್ಯ ನಿರ್ವಹಿಸುತ್ತಿದ್ದು, ಈ ಯೋಜನೆ ಪೂರ್ಣಗೊಳ್ಳುವವರೆಗೂ ಪರ್ಯಾಯ ವ್ಯವಸ್ಥೆ ಕುರಿತು ಮತ್ತು ಮೆಟ್ರೋ ಪ್ರಯಾಣಿಕರಿಗೆ ತೊಂದರೆಯಾಗುವ ಕುರಿತು ಮತ್ತು ಅಂತರಾಷ್ಟ್ರೀಯ ಬಸ್ ಸ್ಟೇಷನ್ ಮಾಡ್ಯೂಲ್ (ಸಿಂಗಾಪೂರ್ ಬಸ್ ನಿಲ್ದಾಣ ಮಾಡ್ಯೂಲ್ ಮತ್ತು ಇತರೇ) ಅಳವಡಿಸಿಕೊಳ್ಳುವ ಕುರಿತು ಸದನದಲ್ಲಿ ಚರ್ಚಿಸಲು ನಿಯಮ-330 ರಡಿ ಮಾನ್ಯ ಸಾರಿಗೆ ಮತ್ತು ಮುಜರಾಯಿ ಸಚಿವರಲ್ಲಿ ಪ್ರಸ್ತಾಪಿಸ ಬಯಸುತ್ತೇನೆ.

**ಉತ್ತರ:**

ಬೆಂಗಳೂರು ಮೆಜಸ್ಟಿಕ್ ಬಸ್ ನಿಲ್ದಾಣವನ್ನು ಮರು ಅಭಿವೃದ್ಧಿಪಡಿಸಿ, ಸಾರ್ವಜನಿಕ ಪ್ರಯಾಣಿಕರಿಗೆ ಮೂಲಭೂತ ಸೌಕರ್ಯಗಳನ್ನು ಒದಗಿಸಲು ಸರ್ಕಾರ ಯೋಜಿಸಿದ್ದು, ಪ್ರಾಜೆಕ್ಟ್ ಮೆಜಸ್ಟಿಕ್ ಯೋಜನೆ ಅಡಿಯಲ್ಲಿ ಬಸ್ ನಿಲ್ದಾಣದ ಜಾಗವನ್ನು ವಾಣಿಜ್ಯ ಸಂಕೀರ್ಣದೊಂದಿಗೆ ಸರ್ಕಾರಿ-ಖಾಸಗಿ ಸಹಭಾಗಿತ್ವದ (ಪಿ.ಪಿ.ಪಿ) ಮಾದರಿಯಲ್ಲಿ ಕೈಗೊಳ್ಳಲು ಉದ್ದೇಶಿಸಿ, 2025-26ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ 465ರಲ್ಲಿ ಘೋಷಿಸಲಾಗಿರುತ್ತದೆ.

ಮೆಜಸ್ಟಿಕ್ ಬಸ್ ನಿಲ್ದಾಣ ಜಾಗವು ಒಟ್ಟು 40 ಎಕರೆ ಪ್ರದೇಶ ಹೊಂದಿದ್ದು, 08 ಎಕರೆ ಜಾಗದಲ್ಲಿ ಮೆಟ್ರೋ ರೈಲು ನಿಲ್ದಾಣ, 20 ಎಕರೆ ಜಾಗದಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಬಸ್ ನಿಲ್ದಾಣ ಹಾಗೂ 12 ಎಕರೆ ಜಾಗದಲ್ಲಿ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣಗಳು ಕಾರ್ಯನಿರ್ವಹಿಸುತ್ತಿದ್ದು, ಮೆಟ್ರೋ ರೈಲು ನಿಲ್ದಾಣದ 08 ಎಕರೆ ಜಾಗವನ್ನು ಹೊರತುಪಡಿಸಿ ಉಳಿದ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಹಾಗೂ ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಬಸ್ ನಿಲ್ದಾಣಗಳ ಒಟ್ಟು 32 ಎಕರೆ ಜಾಗದಲ್ಲಿ ಸುಸಜ್ಜಿತವಾದ ಬಸ್ ನಿಲ್ದಾಣವನ್ನು ವಾಣಿಜ್ಯ ಸಂಕೀರ್ಣದೊಂದಿಗೆ ನಿರ್ಮಿಸುವ ಕಾಮಗಾರಿಯನ್ನು 'ಪ್ರಾಜೆಕ್ಟ್ ಮೆಜಸ್ಟಿಕ್' ಯೋಜನೆಯಡಿ ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ (ಪಿ.ಪಿ.ಪಿ) ಕೈಗೊಳ್ಳಲು ಸರ್ಕಾರವು ತಾತ್ವಿಕ ಒಪ್ಪಿಗೆ ನೀಡಿರುತ್ತದೆ.

ಅದರಂತೆ, ಕರ್ನಾಟಕ ರಾಜ್ಯ ರಸೆ ಸಾರಿಗೆ ನಿಗಮ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆ ಸೇರಿ ಬೆಂಗಳೂರು ಕೆಂಪೇಗೌಡ ಬಸ್ ನಿಲ್ದಾಣವನ್ನು ಸಾರ್ವಜನಿಕ-ಖಾಸಗಿ ಸಹಭಾಗಿತ್ವದಲ್ಲಿ ಇಂಟರ್ ಮೋಡಲ್ ಟ್ರಾನ್ಸಿಟ್ ಹಬ್ ಅಭಿವೃದ್ಧಿಪಡಿಸುವ ಪ್ರಾಜೆಕ್ಟ್ ಮೆಜೆಸ್ಟಿಕ್ ಯೋಜನೆಯನ್ನು ಕೈಗೊಳ್ಳಲು ಕರ್ನಾಟಕ ಸರ್ಕಾರದ ಮೂಲಸೌಕರ್ಯ ಅಭಿವೃದ್ಧಿ ಇಲಾಖೆಯ ನೋಂದಾಯಿತ Transaction Advisor ರವರಾದ M/s. Resurgent India Limited ಇವರು ಟೆಂಡರ್ ಆಧಾರದ ಮೇಲೆ ನಿಯಮಾನುಸಾರವಾಗಿ

ನೇಮಕಗೊಂಡಿದ್ದು, ದಿನಾಂಕ:15.11.2025ರಂದು ಕಾರ್ಯಾದೇಶ ಪತ್ರ ನೀಡಲಾಗಿದ್ದು, ಸದರಿಯವರು ಯೋಜನೆಯನ್ನು ಅನುಷ್ಠಾನಗೊಳಿಸಲು ಬೇಕಾದ ನಕ್ಷೆ, ಯೋಜನೆಯ ರೂಪುರೇಷೆ, ದಾಖಲೆಗಳು, ಅಭಿವೃದ್ಧಿದಾರರನ್ನು ಆಯ್ಕೆಗೊಳಿಸಲು ಬೇಕಾದ ಟೆಂಡರ್ ದಾಸ್ತಾವೇಜನ್ನು ತಯಾರಿಸಲು ಬೇಕಾದ ಸಂಚಾರ ಅಧ್ಯಯನ, ಮಾರುಕಟ್ಟೆ ಅಧ್ಯಯನ, ತಾಂತ್ರಿಕ ವರದಿಗಳನ್ನು ತಯಾರಿಸುವ ಪ್ರಕ್ರಿಯೆಗಳನ್ನು ಪ್ರಾರಂಭಿಸಿರುತ್ತಾರೆ.

ಯೋಜನೆಯನ್ನು ಅನುಷ್ಠಾನಗೊಳಿಸಲು ಬೇಕಾದ ಪ್ರಾಥಮಿಕ ಮಾಹಿತಿಗಳನ್ನು ಸಂಗ್ರಹಿಸಿ, Inception Report ಹಾಗೂ Concept Planಗಳನ್ನು ತಯಾರಿಸಿ, ದಿನಾಂಕ:06.01.2026 ರಂದು ಪ್ರಾಥಮಿಕ ಸಭೆ ನಡೆಸಿ, ಸದರಿ ಸಭೆಯಲ್ಲಿ M/s.Resurgent India Limited ಇವರು ದೇಶವಿದೇಶಗಳಲ್ಲಿ ಯಶಸ್ವಿಯಾದ Transport Hub ಮಾದರಿಗಳ ಅಧ್ಯಯನ ಕೈಗೊಂಡು ಸ್ಥಳೀಯ ಅವಶ್ಯಕತೆಗಳನ್ನು ಪರಿಗಣಿಸಿ, Inception Report ತಯಾರಿಸಿರುತ್ತಾರೆ.

ಸದರಿ ಯೋಜನೆಗೆ ಅಭಿವೃದ್ಧಿದಾರರನ್ನು ಆಯ್ಕೆಗೊಳಿಸಿ, ಯೋಜನೆಯನ್ನು ಅನುಷ್ಠಾನಗೊಳಿಸುವ ಸಮಯದಲ್ಲಿ ಹಾಲಿ ಇರುವ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಗಳು ಅತಿ ಪ್ರಮುಖ ಬಸ್ಸುಗಳ ಕಾರ್ಯಾಚರಣೆ ಉಳಿಸಿಕೊಂಡು ಕಾರ್ಯಾಚರಣೆಗೆ ದಕ್ಕೆಯಾಗದಂತೆ ಕೆಲಸ ನಿರ್ವಹಿಸಲು ಉದ್ದೇಶಿಸಲಾಗಿರುತ್ತದೆ. ಉಳಿದಂತೆ, ನಗರದಲ್ಲಿ ಹಾಲಿ ಟಿ.ಟಿ.ಎಂ.ಸಿ.ಗಳನ್ನು ಕಾರ್ಯಾಚರಣೆಗಾಗಿ ಉಪಯೋಗಿಸಿಕೊಂಡು ಸಾರ್ವಜನಿಕ ಪ್ರಯಾಣಿಕರಿಗೆ ಯಾವುದೇ ರೀತಿಯ ತೊಂದರೆಯಾಗದಂತೆ ಮೂಲಭೂತ ಸೌಲಭ್ಯಗಳಾದ ಕುಡಿಯುವ ನೀರು, ಶೌಚಾಲಯ, ಆಸನ ವ್ಯವಸ್ಥೆ, ಮಹಿಳಾ ವಿಶ್ರಾಂತಿ ಕೊಠಡಿಗಳನ್ನು ಒಳಗೊಂಡಂತೆ ತಾತ್ಕಾಲಿಕ ವ್ಯವಸ್ಥೆಯನ್ನು ಕಲ್ಪಿಸಿ ಯೋಜನೆಯನ್ನು ಅನುಷ್ಠಾನಗೊಳಿಸಲು ಯೋಜಿಸಲಾಗಿದೆ.

ಮುಂದುವರೆದು, ಮೆಟ್ರೋ, ನಗರ ಸಾರಿಗೆ ಹಾಗೂ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮ ಮತ್ತು ಬೆಂಗಳೂರು ಮಹಾನಗರ ಸಾರಿಗೆ ಸಂಸ್ಥೆಯ ಪ್ರಯಾಣಿಕರ ದೈನಂದಿನ ಸಂಚಾರಕ್ಕೆ ಯಾವುದೇ ಅಡಚಣೆಯಾಗದಂತೆ ಅವಶ್ಯವಿರುವ ಕಡೆಗಳಲ್ಲಿ ಅಗತ್ಯ ಇಳಿಜಾರು, ರೈಲಿಂಗ್ಸ್ ಸ್ಕೈ-ವಾಕ್‌ಗಳನ್ನು ಸುರಕ್ಷತಾ ಬೇಲಿಯೊಂದಿಗೆ ಒದಗಿಸಲು ಕ್ರಮ ಕೈಗೊಳ್ಳಲಾಗುವುದು.

ಸಂಖ್ಯೆ: ಟಿಡಿ 2 ಟಿಸಿಕ್ಯೂ 2026

(ರಾಮಲಿಂಗಾರೆಡ್ಡಿ)
ಸಾರಿಗೆ ಮತ್ತು ಮುಜರಾಯಿ ಸಚಿವರು